# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ದಾಸರಹಳ್ಳಿ ವಲಯ, ಹೆಗ್ಗನಹಳ್ಳಿ ಉಪವಿಭಾಗ

### ವಾರ್ಡ್ ನಂ.71 : ಹೆಗ್ಗನಹಳ್ಳಿ

**ದಿನಾಂಕ: 05.03.2022 ರಂದು ಬೆಳಿಗ್ಗೆ 11.30 ಗಂಟೆಗೆ ಶ್ರೀ ಬಿ.ಆರ್.ರವಿಕುಮಾರ್, ನೋಡಲ್ ಅಧಿಕಾರಿ, ವಾರ್ಡ್ 71 ರವರ ಅಧ್ಯಕ್ಷತೆಯಲ್ಲಿ ಸಹಾಯಕ ಕಾರ್ಯಪಾಲಕ ಅಭಿಯಂತರರು, ಹೆಗ್ಗನಹಳ್ಳಿ ಉಪವಿಭಾಗ ಕಛೇರಿಯಲ್ಲಿ ನಡೆದ ಸಭೆಯ ನಡಾವಳಿಗಳು:**

ಸಭೆಯಲ್ಲಿ ಹಾಜರಿದ್ದವರು:

| ಕ್ರ.ಸಂ | ಹೆಸರು | ಪದನಾಮ |
|---|---|---|
| 1 | ಶ್ರೀ ಬಿ.ಆರ್.ರವಿಕುಮಾರ್ | ನೋಡಲ್ ಅಧಿಕಾರಿ-ವಾರ್ಡ್ ನಂ.71 |
| 2 | ಜಯಂತ್ ಕುಮಾರ್ | ಸಹಾಯಕ ಅಭಿಯಂತರರು, ಕಾರ್ಯದರ್ಶಿ ಹಾಗೂ ಸಂಚಾಲಕರು-ವಾರ್ಡ್ 71 |
| 3 | ಶ್ರೀ ಅವೀಶ್ ಹೆಚ್ ಎಂ | ಸಹಾಯಕ ಅಭಿಯಂತರರು, ವಾರ್ಡ್ 70 |
| 4 | ರಾಮಣ್ಣ | ಹಿರಿಯ ಆರೋಗ್ಯ ಪರಿವೀಕ್ಷಕರು |
| 5 | ನಂದೀಶ್ ಕುಮಾರ್ | ಸಹಾಯಕ ಅಭಿಯಂತರರು-ಬಿ.ಡಬ್ಲ್ಯೂ.ಎಸ್.ಎಸ್.ಬಿ |
| 7 | ಶ್ರೀ ವೆಂಕಟರಾಜು | ಸದಸ್ಯರು |
| 8 | ಹೆಚ್ ಎಸ್ ಉಮೇಶ್ | ಸದಸ್ಯರು |
| 9 | ಹೆಚ್ ಮಂಜುನಾಥ್ | ಸದಸ್ಯರು |
| 10 | ಎನ್ ನಟರಾಜು | ಸದಸ್ಯರು |
| 10 | ಕೆ ಎ ಉಮೇಶ್ | ಸದಸ್ಯರು |

:ನಡಾವಳಿಯ ವರದಿ:

- ಕಾರ್ಯದರ್ಶಿಗಳಾದ ಶ್ರೀ ಅವೀಶ್ ಹೆಚ್ ಎಂ ಮಾತನಾಡುತ್ತಾ ಸಭೆಗೆ ಹಾಜರಾದ ನೋಡಲ್ ಅಧಿಕಾರಿ ಹಾಗೂ ಪಾಲಿಕೆಯ ಅಧಿಕಾರಿಗಳು/ನೌಕರರಿಗೆ ಸ್ವಾಗತ ಕೋರಿದರು.

**ವಿಷಯ ಸಂಖ್ಯೆ: 1:-** ಹೊಯ್ಸಳ ನಗರದ 2ನೇ ಮುಖ್ಯರಸ್ತೆಯಲ್ಲಿ ರಸ್ತೆ ದುರಸ್ಥಿ ಪಡಿಸುವ ಬಗ್ಗೆ

ಸದಸ್ಯರಾದ ವೆಂಕಟರಾಜು ರವರು ಮಾತನಾಡಿ, ಹೆಗ್ಗನಹಳ್ಳಿ ವ್ಯಾಪ್ತಿಯ ಸುಂಕದಕಟ್ಟೆ, ಹೊಯ್ಸಳನಗರದಲ್ಲಿ ಮುಖ್ಯರಸ್ತೆ, ಅಯ್ಯಪ್ಪ ದೇವಸ್ಥಾನದ ಎದುರು ಪೂರ್ತಿ ರಸ್ತೆ ಕಿತ್ತುಹೋಗಿದ್ದು, ಇದರಿಂದಾಗಿ ಸಾರ್ವಜನಿಕರ ಸಂಚಾರ ಅಡಚಣೆಯಾಗಿದ್ದು ರಸ್ತೆ ದುರಸ್ಥಿಪಡಿಸುವಂತೆ ಕೋರಿದರು.

ಇದಕ್ಕೆ ಸಹಾಯಕ ಅಭಿಯಂತರರು ರವರು ಮಾತನಾಡಿ ಸದರಿ ಸ್ಥಳವನ್ನು ಈಗಾಗಲೇ ಪರಿಶೀಲಿಸಲಾಗಿದ್ದು ಸದರಿ ಭಾಗವು ಪೂರ್ತಿ ಹಾಳಾಗಿದ್ದು ಈ ಸಂಬಂಧ ಅನುದಾನ ನಿರೀಕ್ಷಿಸಲಾಗಿದೆ ಎಂದು ತಿಳಿಸಿದರು.

- **<u>ವಿಷಯ ಸಂಖ್ಯೆ: 2:-</u> ಪೈಪ್ ಲೇನ್ ರಸ್ತೆಯಲ್ಲಿ ಫುಟ್ ಪಾತ್ ಒತ್ತುವರಿ ಮಾಡಿಕೊಂಡು ಅಂಗಡಿಗಳನ್ನು ಇಟ್ಟಿರುವ ಬಗ್ಗೆ**

  ಸದಸ್ಯರಾದ ಶ್ರೀ ವೆಂಕಟರಾಜುರವರು ಮಾತನಾಡಿ, ಸುಂಕದಕಟ್ಟೆಯ ಪೈಪ್ ಲೇನ್ ರಸ್ತೆಯ 2ನೇ ಮುಖ್ಯರಸ್ತೆಯಲ್ಲಿ ಫುಟ್‌ಪಾತ್ ಒತ್ತುವರಿ ಮಾಡಿಕೊಂಡು ಅಂಗಡಿಗಳನ್ನು ಇಟ್ಟಿದ್ದು ಅದನ್ನು ತೆರವುಗೊಳಿಸಲು ಕೋರಿದರು.

  ಇದಕ್ಕೆ ನೋಡಲ್ ಅಧಿಕಾರಿರವರು ಮಾತನಾಡಿ, ವಾರ್ಡ್ 71ರ ಸಹಾಯಕ ಅಭಿಯಂತರರು & ಹಿರಿಯ ಆರೋಗ್ಯ ಪರಿವೀಕ್ಷಕರು ಜೊತೆಗೂಡಿ ಫುಟ್‌ಪಾತ್ ಒತ್ತುವರಿ ತೆರವುಗೊಳಿಸಲು ಅಗತ್ಯ ಕ್ರಮ ಕೈಗೊಳ್ಳುವಂತೆ ಕಾರ್ಯದರ್ಶಿಯವರಿಗೆ ಸೂಚಿಸಿದರು.

- **<u>ವಿಷಯ ಸಂಖ್ಯೆ: 3 :-</u> ಹಳೆಯ ವಿದ್ಯುತ್ ಕಂಬಗಳನ್ನು ತೆರವುಗೊಳಿಸುವ ಬಗ್ಗೆ**

  ಸದಸ್ಯರಾದ ಶ್ರೀ ವೆಂಕಟರಾಜುರವರು ಮಾತನಾಡಿ, ಹೊಯ್ಸಳ ನಗರದಲ್ಲಿ ವಾರ್ಡ್ ಸಮಿತಿ ಸಭೆಯಲ್ಲಿ ಪ್ರಸ್ತಾಪಿಸಿದರ ಪರಿಣಾಮವಾಗಿ ಹಳೆಯ ವಿದ್ಯುತ್ ಕಂಬಗಳ ಬದಲಿಗೆ ಹೊಸದಾಗಿ ವಿದ್ಯುತ್ ಕಂಬಗಳನ್ನು ಅಳವಡಿಸಲಾಗಿದೆ. ಆದರೆ ಹಳೆಯ ಕಂಬಗಳನ್ನು ಬೇರೆಡೆಗೆ ತೆರವುಗೊಳಿಸಿರುವುದಿಲ್ಲ ಈ ಬಗ್ಗೆ ಸಂಬಂಧಪಟ್ಟವರಿಗೆ ತಿಳಿಸಲು ಕೋರಿದರು.

ಈ ಬಗ್ಗೆ ನೋಡಲ್ ಅಧಿಕಾರಿರವರು ಮಾತನಾಡಿ ಈಗಾಗಲೇ ಈ ಬಗ್ಗೆ ಬೆಸ್ಕಾಂ ನವರ ಗಮನಕ್ಕೆ ತರಲಾಗಿದೆ. ಸದರಿಯವರು ಈಗಾಗಲೇ ಒಂದು ಕಡೆಯಿಂದ ಹಳೆಯ ಕಂಬಗಳನ್ನು ತೆರವುಗೊಳಿಸುವ ಕಾರ್ಯ ಪ್ರಗತಿಯಲ್ಲಿರುವುದಾಗೀ ತಿಳಿಸಿರುವ ವಿಷಯವನ್ನು ಸಭೆಗೆ ತಿಳಿಸಿದರು.

ಕೊನೆಯದಾಗಿ ಮಾನ್ಯ ನೋಡಲ್ ಅಧಿಕಾರಿರವರು ಸಭೆಗೆ ಹಾಜರಾದ ಎಲ್ಲಾ ಅಧಿಕಾರಿ/ನೌಕರರಿಗೆ ಮತ್ತು ಸದಸ್ಯರಿಗೆ ವಂದನೆಯನ್ನು ತಿಳಿಸುತ್ತಾ ಇನ್ನು ಮುಂದೆಯೂ ಈ ಸಭೆಗಳಲ್ಲಿ ಪೂರ್ವತಯಾರಿಯೊಂದಿಗೆ ಪಾಲ್ಗೊಂಡು ವಾರ್ಡ್ ನಂ.71ರ ಅಭಿವೃದ್ಧಿಗೆ ಸಹಕಾರ ನೀಡಬೇಕೆಂದು ಮನವಿ ಮಾಡಿದರು.

➢ ಸದಸ್ಯ ಕಾರ್ಯದರ್ಶಿ ಹಾಗೂ ಸಹಾಯಕ ಅಭಿಯಂತರರಾದ ಶ್ರೀ ಜಯಂತ್ ಕುಮಾರ್ ರವರು ಸಭೆಗೆ ಹಾಜರಾದ ಎಲ್ಲಾ ಅಧಿಕಾರಿಗಳು/ನೌಕರರಿಗೂ ಮತ್ತು ಸದಸ್ಯರಿಗೂ ವಂದನೆಯನ್ನು ತಿಳಿಸುವುದರೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ಸದಸ್ಯ ಕಾರ್ಯದರ್ಶಿ
ಹಾಗೂ ಸಹಾಯಕ ಅಭಿಯಂತರರು
ವಾರ್ಡ್ 71, ಹೆಗ್ಗನಹಳ್ಳಿ
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ವಾರ್ಡ್ ಸಮಿತಿ ಅಧ್ಯಕ್ಷರು
ಹಾಗೂ ವಾರ್ಡ್‌ನ ನೋಡಲ್ ಅಧಿಕಾರಿ
ವಾರ್ಡ್ ನಂ.71, ಹೆಗ್ಗನಹಳ್ಳಿ
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಪ್ರತಿಯನ್ನು:

1) ಮಾನ್ಯ ಶಾಸಕರು, ದಾಸರಹಳ್ಳಿ ವಿಧಾನಸಭಾ ಕ್ಷೇತ್ರ, ರವರ ಆದ್ಯ ಗಮನಕ್ಕೆ ಕಳುಹಿಸಿದೆ.
2) ಮಾನ್ಯ ವಲಯ ಆಯುಕ್ತರು, ದಾಸರಹಳ್ಳಿ ವಲಯ, ಬಿಬಿಎಂಪಿ ರವರ ಅವಗಾಹನೆಗಾಗಿ ಕಳುಹಿಸಿದೆ.
3) ಜಂಟಿ ಆಯುಕ್ತರು, ದಾಸರಹಳ್ಳಿ ವಲಯ, ಬಿಬಿಎಂಪಿ ರವರ ಅವಗಾಹನೆಗಾಗಿ ಕಳುಹಿಸಿದೆ.
4) ಕಾರ್ಯಪಾಲಕ ಅಭಿಯಂತರರು (ದಾಸರಹಳ್ಳಿ ವಿಭಾಗ) ರವರ ಮಾಹಿತಿಗಾಗಿ ಕಳುಹಿಸಿದೆ.
5) ಸಹಾಯಕ ಕಾರ್ಯಪಾಲಕ ಅಭಿಯಂತರರು (ಹೆಗ್ಗನಹಳ್ಳಿ) ರವರ ಮಾಹಿತಿಗಾಗಿ ಕಳುಹಿಸಿದೆ.
6) ಸಹಾಯಕ ಕಂದಾಯ ಅಧಿಕಾರಿ (ಹೆಗ್ಗನಹಳ್ಳಿ) ರವರ ಮಾಹಿತಿಗಾಗಿ ಕಳುಹಿಸಿದೆ.
7) ಹಿರಿಯ/ಕಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್ ನಂ.71 ರವರ ಮಾಹಿತಿಗಾಗಿ
8) ವಾರ್ಡ್ ಸಮಿತಿ ಸಭೆಯ ಸದಸ್ಯರಿಗೆ ಮಾಹಿತಿಗಾಗಿ ಕಳುಹಿಸಿದೆ.
9) ಕಛೇರಿ ಕಡತಕ್ಕೆ